**ದಿನಾಂಕಃ 17.06.2026 ರಂದು ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ.ಡಿ.ಎಸ್. ವಕೀಲರಿಂದಃ**

ನಾನು ಈ ಪ್ರಕರಣದಲ್ಲಿ 1 ನೇ ಅರ್ಜಿದಾರನಾಗಿರುತ್ತೇನೆ. ನನ್ನ ಸತ್ಯಪೂರ್ವಕ ಹೇಳಿಕೆಯನ್ನು ಪ್ರಮಾಣ ಪತ್ರದ ಮುಖಾಂತರ ಸಲ್ಲಿಸಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ. ಪ್ರಮಾಣ ಪತ್ರವನ್ನು ನಾನು ನೀಡಿದ ಮಾಹಿತಿ ಮೇರೆಗೆ ತಯಾರಿಸಲಾಗಿರುತ್ತದೆ. ಪ್ರಮಾಣ ಪತ್ರವನ್ನು ನನಗೆ ಓದಿ ಹೇಳಲಾಗಿದ್ದು, ಅದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

**ನಾನು ಈ ಕೆಳಗಿನ ದಾಖಲೆಗಳನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಿರುತ್ತೇನೆ ಅವುಗಳನ್ನು ಕೆಳಗಿನಂತೆ ಗುರುತಿಸಲಾಗಿರುತ್ತದೆ.**

| | |
|---|---|
| **ನಿಪಿಃ 01** | ತಹಶೀಲ್ದಾರ, ತಿ.ನರಸೀಪುರ ನೀಡಿರುವ ಅಲಭ್ಯ ಪ್ರಮಾಣ ಪತ್ರ |
| **ನಿಪಿಃ 02 ಮತ್ತು 03** | ಪತ್ರಿಕಾ ಪ್ರಕಟಣೆಗಳು |
| **ನಿಪಿಃ 04 ಮತ್ತು 05** | ಅರ್ಜಿದಾರರ ಆಧಾರ್ ಕಾರ್ಡ್‌ನ ನೋಟರೈಸ್ಡ್ ಪ್ರತಿಗಳು |
| **ನಿಪಿಃ 06** | ನೋಟರೈಸ್ಡ್ ವಂಶವೃಕ್ಷ |

ನನ್ನ ಅಜ್ಜಿಯಾದ ನಿಂಗಮ್ಮ ಕೋ ಲೇಟ್ ಮಲ್ಲ, ದಿನಾಂಕಃ 10.01.1968 ರಂದು ತಿ.ನರಸೀಪುರ ತಾಲ್ಲೂಕಿನ, ಸೀಹಳ್ಳಿ ಗ್ರಾಮದಲ್ಲಿ ಮರಣ ಹೊಂದಿರುತ್ತಾರೆ. ಸದರಿ ನನ್ನ ಅಜ್ಜಿಯ ಮರಣ ಪ್ರಮಾಣ ಪತ್ರವು ಪೌತಿ ಖಾತೆ ಮಾಡಿಸಿಕೊಳ್ಳುವ ಸಲುವಾಗಿ ಬೇಕಾಗಿದೆ. ಆದ ಕಾರಣ ನನ್ನ ಅಜ್ಜಿಯ ಮರಣವನ್ನು ನೋಂದಣಿ ಮಾಡಿಸಲು ಹಾಗೂ ಈ ಬಗ್ಗೆ ಪ್ರಮಾಣ ಪತ್ರವನ್ನು ಎದುರುದಾರರಿಂದ ಕೊಡಿಸಲು ಆದೇಶಿಸುವಂತೆ ಕೋರುತ್ತೇನೆ.

**ಪಾಟೀ ಸವಾಲುಃ ಎದುರುದಾರರ ಪರವಾಗಿಃ**

ಎದುರುದಾರರು ಏಕಪಕ್ಷೀಯ ಇದ್ದು, ಪಾಟೀ ಸವಾಲು ಇರುವುದಿಲ್ಲವೆಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿಯಾಗಿದೆ. Sd/-

**( ಸಚಿನ್.ಹೆಚ್.ಆರ್)**

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ

ತಿ.ನರಸೀಪುರ.